**ಹಿರಿಯ ಸಿವಿಲ್ ನ್ಯಾಯಾಧೀಶರು ಮತ್ತು ಜೆ.ಎಂ.ಎಫ್.ಸಿ. ರವರ ನ್ಯಾಯಾಲಯ, ಚಿಂತಾಮಣಿ**

**ಸಿಸಿ ಸಂಖ್ಯೆ:99/2023**

ಚಾಸಾ: 08
ಫ್ರಾಸಾ: 07

ದಿನಾಂಕ 03.01.2026 ರಂದು ಸಾಕ್ಷಿಯನ್ನು ಕರೆಸಿ ಪ್ರಮಾಣ ವಚನ ಭೋದಿಸಲಾಯಿತು.

| | | |
|---|---|---|
| ಸಾಕ್ಷಿದಾರರ ಹೆಸರು | : | ಚಂದ್ರಪ್ಪ |
| ತಂದೆಯ ಹೆಸರು | : | ಮುನಿಯಪ್ಪ |
| ವಯಸ್ಸು | : | 56 ವರ್ಷ |
| ಉದ್ಯೋಗ | : | ಎಎಸ್ಐ |
| ವಾಸಸ್ಥಳ | : | ಚಿಂತಾಮಣಿ. |

**ಮುಖ್ಯ ವಿಚಾರಣೆಃ ಮಾನ್ಯ ಸಹಾಯಕ ಸರ್ಕಾರಿ ಅಭಿಯೋಜಕರಿಂದಃ**

ಕಳೆದ ಮೂರು ವರ್ಷಗಳಿಂದ ನಾನು ಕೆಂಚಾರ್ಲಹಳ್ಳಿ ಪೊಲೀಸ್ ಠಾಣೆಯಲ್ಲಿ ಎಎಸ್ಐ ಆಗಿ ಸೇವೆ ಸಲ್ಲಿಸುತ್ತಿದ್ದೇನೆ.

ಈ ಪ್ರಕರಣಕ್ಕೆ ಸಂಬಂಧಿಸಿದಂತೆ ದಿಃ28.05.2023 ರಂದು ಚಾಸಾ 7 ರವರು ಚಿಂತಾಮಣಿ ಸರ್ಕಾರಿ ಆಸ್ಪತ್ರೆಯಿಂದ ಬಂದ ಮಾಹಿತಿಯ ಮೇರೆಗೆ ಆಸ್ಪತ್ರೆಗೆ ಬೇಟಿ ನೀಡಿ ಚಾಸಾ 1 ರವರ ಹೇಳಿಕೆಯನ್ನು ದಾಖಲು ಮಾಡಿ ಹಾಜರು ಮಾಡಿದ ಮೇರೆಗೆ ಪ್ರಕರಣವನ್ನು ದಾಖಲಿಸಿ, ಪ್ರವವರದಿಯನ್ನು ಮೇಲಾಧಿಕಾರಿಗಳಿಗೂ ಮತ್ತು ನ್ಯಾಯಾಲಯಕ್ಕೂ ನಿವೇದಿಸಿಕೊಂಡಿರುತ್ತೇನೆ. ಅದೇ ದಿನ ಕೃತ್ಯ ನಡೆದ ಸ್ಥಳವಾದ ಕದರೇನಹಳ್ಳಿ ಗ್ರಾಮದ ಪಿರ್ಯಾದುದಾರರ ವಾಸದ ಮನೆಯ ಬಳಿ ಸಾಯಂಕಾಲ 4 ರಿಂದ 5 ಗಂಟೆಯೊಳಗೆ ಚಾಸಾ 2 ರವರು ಸ್ಥಳ ತೋರಿಸಿಕೊಟ್ಟ ಮೇರೆಗೆ ಚಾಸಾ 2, 4, 5 ರವರ ಸಮಕ್ಷಮದಲ್ಲಿ ಪಂಚನಾಮೆ ಮಾಡಿ ಒಂದು ಕಲ್ಲನ್ನು ವಶಕ್ಕೆ ತೆಗೆದುಕೊಂಡಿದ್ದು, ನಿಪಿ 2 ರಂತೆ ಪಂಚನಾಮೆ ಬರೆದಿರುತ್ತೇನೆ. ವಶಕ್ಕೆ ತೆಗೆದುಕೊಂಡ ಸ್ವತ್ತುಗಳನ್ನು ಸ್ವತ್ತು ಪಟ್ಟಿಯ ಮುಖಾಂತರ ನ್ಯಾಯಾಲಯಕ್ಕೆ ನಿವೇದಿಸಿಕೊಂಡಿರುತ್ತೇನೆ. ಪ್ರಕರಣವನ್ನು ಮುಂದಿನ ತನಿಖೆಗಾಗಿ ಚಾಸಾ 9 ರವರಿಗೆ ವರ್ಗಾಯಿಸಿರುತ್ತೇನೆ. ನಿಪಿ 1 ರಲ್ಲಿ ಸಾಕ್ಷಿಯ

ಸಹಿಯನ್ನು ನಿಪಿ1 ಎ ಎಂದು, ನಿಪಿ 2 ರಲ್ಲಿ ಸಾಕ್ಷಿಯ ಸಹಿಯನ್ನು ನಿಪಿ2 ಸಿ ಎಂದು ಗುರುತಿಸಲಾಯಿತು. ಪ್ರ.ವ.ವರದಿಯನ್ನು ನಿಪಿ5 ಮತ್ತು ಸಾಕ್ಷಿಯ ಸಹಿಯನ್ನು ನಿಪಿ5 ಎ ಎಂದು ಗುರುತಿಸಲಾಯಿತು. ಸಾಕ್ಷಿ ಎಂ. ಒ 1 ನ್ನು ನೋಡಿ ಗುರುತಿಸಿರುತ್ತಾರೆ.

**<u>ಪಾಟೀ ಸವಾಲುಃ ಶ್ರೀ ಆರ್ ವಿ ವಕೀಲರಿಂದಃ</u>**

ನಾನು ಯಾವುದೇ ದೂರು ದಾಖಲು ಮಾಡಿಕೊಂಡಿಲ್ಲ ಎಂದರೆ ಸರಿಯಲ್ಲ. ಚಾಸಾ 1 ರವರಿಗೆ ಯಾವುದೇ ರೀತಿಯ ಗಾಯ ಆಗಿರಲಿಲ್ಲ ಎಂದರೆ ಸರಿಯಲ್ಲ. ರಕ್ತ ತಾಗಿದ ಬಟ್ಟೆಗಳನ್ನು ನಾನು ವಶಕ್ಕೆ ತೆಗೆದುಕೊಂಡಿಲ್ಲ. ಎಂ. ಒ 1 ರಲ್ಲಿ ರಕ್ತದ ಕಲೆ ಇರಲಿಲ್ಲ ಎಂದರೆ ಸರಿಯಲ್ಲ. ಎಂ. ಒ 1 ರಲ್ಲಿ ಯಾವುದೇ ಸಹಿ ಮತ್ತು ದಿನಾಂಕ ಇಲ್ಲ ಎಂದರೆ ನನಗೆ ಗೊತ್ತಿಲ್ಲ. ನಾನು ಎಂ. ಒ 1 ನ್ನು ವಶಕ್ಕೆ ತೆಗೆದುಕೊಳ್ಳದೇ ಇರುವ ಕಾರಣ ಯಾವುದೇ ಸಹಿ ಮತ್ತು ದಿನಾಂಕ ನಮೂದು ಮಾಡಿಲ್ಲ ಎಂದರೆ ಸರಿಯಲ್ಲ. ಪಿರ್ಯಾದು ಮಾತು ಕೇಳಿಕೊಂಡು ನಾನು ಸುಳ್ಳು ಸಾಕ್ಷ್ಯ ನುಡಿಯುತ್ತಿದ್ದೇನೆ ಎಂದರೆ ಸರಿಯಲ್ಲ.

**ಮರುವಿಚಾರಣೆ : ಇಲ್ಲ.**

(ತೆರೆದ ನ್ಯಾಯಾಲಯದಲ್ಲಿ ನನ್ನ ಉಕ್ತಲೇಖನದಂತೆ ಸಾಕ್ಷಿಯ ಹೇಳಿಕೆಯನ್ನು ಬೆರಳಚ್ಚು ಮಾಡಲಾಯಿತು.)

ಓ ಹೇ ಕೇ ಸ ಇದೆ

ಸಹಿ/-
ಹಿರಿಯ ಸಿವಿಲ್ ನ್ಯಾಯಾಧೀಶರು
ಹಾಗೂ ಜೆಎಂಎಫ್‌ಸಿ, ಚಿಂತಾಮಣಿ.